ಮೇ 7ರಂದು ಮತದಾನ: ಮೇ 5 ರಿಂದ ಮೇ 8ರವರಗೆ ವಿಜಯನಗರ ಜಿಲ್ಲಾದ್ಯಂತ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ ಆದೇಶ

ಹೊಸಪೇಟೆ ವಿಜಯನಗರ ಏ.-: ಕರ್ನಾಟಕ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಮತದಾನವು ಮೇ 7ರಂದು ನಡೆಯಲಿದ್ದು, ಈ ಹಿನ್ನೆಲೆಯಲ್ಲಿ ಮೇ 5ರ ಸಂಜೆ 06 ಗಂಟೆಯಿಂದ ಮೇ 08ರ ಸಂಜೆ 06 ಗಂಟೆಯವರೆಗೆ ವಿಜಯನಗರ ಜಿಲ್ಲಾದ್ಯಂತ ಸಿಆರ್‌ಪಿಸಿ 1973ರ ಕಲಂ 144ರಡಿ ಹಾಗೂ ಇತರೆ ಜಾರಿಯಲ್ಲಿರುವ ಕಾನೂನು ಅನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿ ಕೆಲವು ಷರತ್ತುಗಳನ್ನು ವಿಧಿಸಿ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಆದೇಶ ಹೊರಡಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ಕರ್ನಾಟಕ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನಲೆಯಲ್ಲಿ ಚುನಾವಣೆಯನ್ನು ಘೋಷಿಸಿದ್ದು, ಅದರಂತೆ ಮೇ 7ರಂದು ಮತದಾನ ನಡೆಯಲಿದೆ. ವಿಜಯನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಮತದಾನ ದಿನದಂದು ಮತದಾನ ಕೊನೆಗೊಳ್ಳುವ 48 ಗಂಟೆಗಳ ಪೂರ್ವದಲ್ಲಿ ಮಾದರಿ ನೀತಿ ಸಂಹಿತೆ ಹಾಗೂ ಪ್ರಜಾ ಪ್ರತಿನಿಧಿ ಕಾಯ್ದೆ 1951ರ ಕಲಂ 126 ರನ್ವಯ ಇರುವ ಷರತ್ತುಗಳು ಹಾಗೂ ನಿಂಬಂಧನೆಗಳನ್ನು ತಪ್ಪದೇ ಪಾಲಿಸಬೇಕಾಗುತ್ತದೆ.

ಮತದಾರರಿಗೆ ವಿವಿಧ ಆಸೆಗಳಿಗೆ ಒಳಪಡಿಸುವುದು, ಬೆದರಿಸಲು ಯತ್ನಿಸುವುದು, ತಮ್ಮ ಪರವಾಗಿ ವರ್ತಿಸಲು ಪ್ರೇರೇಪಿಸುವುದು, ಮತಗಟ್ಟೆ ಕೇಂದ್ರಗಳ ಹತ್ತಿರದಲ್ಲಿ ಪ್ರಚಾರ ಮಾಡುವುದು, ಸಾರ್ವಜನಿಕ ಸಭೆ ನಡೆಸುವುದು, ಮತದಾರರನ್ನು ವಿವಿಧ ಸಾರಿಗೆ ವ್ಯವಸ್ಥೆಗಳ ಮೂಲಕ ಮತಗಟ್ಟೆಗಳಿಗೆ ಕರೆ ತರುವುದು, ಶಾಂತತೆಗೆ ಭಂಗ ಉಂಟು ಮಾಡುವುದು, ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರುವುದು ಹಾಗೂ ಇತರೆ ಅಹಿತಕರ ಘಟನೆಗಳು ನಡೆಯುವಂತೆ ಮಾಡುವ ಸಂಭವನೀಯತೆಗಳಿದ್ದು ಇದನ್ನು ತಡೆಗಟ್ಟುವುದು ಹಾಗೂ ಮತದಾನ ಪಾವಿ??????ತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ವಿಜಯನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಸಿ.ಆರ್.ಪಿ.ಸಿ, 1973ರ ಕಲಂ 144ರ ಮೇರೆಗೆ ಪ್ರತಿಬಂಧಕಾಜ್ಞೆ ವಿಧಿಸಿ ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಅವಶ್ಯಕವೆಂದು ಕಂಡು ಬಂದಿರುವುದರಿಂದ ಪ್ರತಿಬಂಧಕಾಜ್ಞೆಯನ್ನು ಜಾರಿ ಮಾಡಲಾಗಿದೆ.

ವಿಜಯನಗರ ಜಿಲ್ಲೆಯ ವ್ಯಾಪ್ತಿಯಲ್ಲಿ 05ಕ್ಕಿಂತ ಹೆಚ್ಚು ಜನ ಗುಂಪು ಸೇರುವುದು, ಮೆರವಣಿಗೆ ಅಥವಾ ಸಭೆ ಸಮಾರಂಭ ಜರುಗಿಸುವುದನ್ನು ನಿಷೇಧಿಸಿದೆ., ಚುನಾವಣಾ ಅಭ್ಯರ್ಥಿ ಬೆಂಬಲಿಗರು ಸೇರಿ 05 ಜನರಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರತಕ್ಕದ್ದಲ್ಲ., ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಗದೆ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯವನ್ನುಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ಅವುಗಳೊಂದಿಗೆ ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ. ಮತಗಟ್ಟೆ ಕೇಂದ್ರಗಳ 100 ಮೀಟರ್ ವ್ಯಾಪ್ತಿಯ ಒಳಗೆ ಚುನಾವಣೆ ಪ್ರಚಾರ ನಿಷೇಧಿಸಿದೆ., ಈ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಸೈಬರ್ ಕೆಫೆಗಳನ್ನು ನಿರ್ಬಂಧಿಸಿದೆ., ಕಲ್ಲುಗಳನ್ನು, ಕಾರ ಪದಾರ್ಥ ಇಲ್ಲವೆ ಸ್ಫೋಟಕ ವಸ್ತುಗಳು ಹಾಗೂ ಯಾವುದೇ ದಾಹಕ ವಸ್ತುಗಳನ್ನು ಹಾಗೂ ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ., ಕಲ್ಲುಗಳನ್ನು ಮತ್ತು ಎಸೆಯುವಂಥಹ ವಸ್ತುಗಳನ್ನು, ಎಸೆಯುವ ಅಥವಾ ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ., ಮನುಷ್ಯ ರೂಪದ ಅಥವಾ ಅವುಗಳ ಆಕೃತಿ ಅಥವಾ ಪ್ರತಿಮೆಗಳ ಪ್ರದರ್ಶನ ದಹನ ಮಾಡುವುದನ್ನು ಪ್ರತಿಬಂಧಿಸಲಾಗಿದೆ., ಎಲ್ಲಾ ಮತಗಟ್ಟೆ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯ ಸ್ಥಳ ನಿರ್ಬಂಧಿತ ಪ್ರದೇಶವಾಗಿದ್ದು, ಈ ಪ್ರದೇಶದಲ್ಲಿ ಖಾಸಗಿ ವಾಹನಗಳ ನಿಲುಗಡೆ, ಧ್ವನಿವರ್ಧಕ ಬಳಕೆ ಮುಂತಾದವುಗಳನ್ನು ನಿಷೇಧಿಸಿದೆ ಹಾಗೂ ಮತಗಟ್ಟೆ ಕೇಂದ್ರಗಳ 100 ಮೀಟರ್ ವ್ಯಾಪ್ತಿಯಲ್ಲಿ ಪಕ್ಷದ ಪ್ರಚಾರ, ಮತದ ಓಲೈಕೆ ಮುಂತಾದವುಗಳನ್ನು ಮಾಡುವಂತಿಲ್ಲ ಮತ್ತು ಈ ಸ್ಥಳದಲ್ಲಿ ಬಹಿರಂಗವಾಗಿ ಘೋಷಣೆ ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ. ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ. ಯಾವುದೇ ವ್ಯಕ್ತಿ ಬಹಿರಂಗವಾಗಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರೆ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂಥಹ ಮಾರಕಾಸ್ತ್ರಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೇ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನುರೀತ್ಯ ಕ್ರಮ ಜರುಗಿಸಲಾಗುವುದು. ಶವಸಂಸ್ಕಾರಕ್ಕೆ ಅಥವಾ ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳಿಗೆ ಹಾಗೂ ಕೋವಿಡ್-19 ಕಾರ್ಯಗಳಿಗೆ ಈ ಆಜ್ಞೆ ಅನ್ವಯಿಸುವುದಿಲ್ಲ. ಮದುವೆ ಮತ್ತು ಇತರೆ ಧಾರ್ಮಿಕ ಮೆರವಣಿಗೆಗಳು ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರದಂತೆ ಹಾಗೂ ಕೋವಿಡ್ ಮಾರ್ಗಸೂಚಿಗಳನ್ನು ನಿಯಮಗಳನ್ನುಪಾಲಿಸುವುದು. ಮತಗಟ್ಟೆ ಕೇಂದ್ರಗಳ ಸುತ್ತಲೂ 100 ಮೀಟರ್ ಅಂತರದಲ್ಲಿ ಮೊಬೈಲ್ ಫೋನ್, ಕಾರ್ಡಲೆಸ್ ಫೋನ್ ಅಥವಾ ಇನ್ನಿತರ ಎಲೆಕ್ಟ್ರಾನಿಕ್ಸ್ ಉಪಕರಣಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. (ಚುನಾವಣಾ ಕಾರ್ಯದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಚುನಾವಣಾಧಿಕಾರಿ ಅವರಿಂದ ಅನುಮತಿ ಪಡೆದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹೊರತುಪಡಿಸಿ)., ಈ ಅವಧಿಯಲ್ಲಿ ಪ್ರಜಾಪ್ರತಿನಿಧಿ ಕಾಯ್ದೆ 1951ರ ಕಲಂ 126ರ ಷರತ್ತುಗಳನ್ನು ಪಾಲಿಸತಕ್ಕದ್ದು., ಮತಗಟ್ಟೆಗಳ ಸುತ್ತಲೂ 100 ಮೀಟರ್ ಪರಿಮಿತಿಯಲ್ಲಿ ಪ್ರಚಾರಕ್ಕೆ ಸಂಬಂಧಿಸಿದ ಪೋಸ್ಟರ್ ಬ್ಯಾನರ್ ಅಥವಾ ಇನ್ನಾವುದೇ ವಸ್ತುಗಳನ್ನು ಬಳಸುವಂತಿಲ್ಲ., ಈ ಅವಧಿಯಲ್ಲಿ ಧ್ವನಿವರ್ಧಕಗಳನ್ನು ಬಳಸುವಂತಿಲ್ಲ., ಕೋವಿಡ್-19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು, ಈ ಅವಧಿಯಲ್ಲಿ ಕ್ಷೇತ್ರದ ಮತದಾರರಲ್ಲದವರು ಕ್ಷೇತ್ರದ ವ್ಯಾಪ್ತಿಯಿಂದ ಹೊರಗೆ ಹೋಗತಕ್ಕದ್ದು., ಕಲ್ಯಾಣ ಮಂಟಪಗಳು, ಸಮುದಾಯ ಭವನಗಳು, ಹೋಟೆಲ್‌ಗಳು ಮತ್ತು ಅತಿಥಿ ಗೃಹಗಳಲ್ಲಿ ವಾಸ್ತವ್ಯ ಹೂಡಿದವರ ಪಟ್ಟಿಗಳ ಪರಿಶೀಲನೆ ಮಾಡಿ ಮತದಾರರಲ್ಲದವರನ್ನು ಕ್ಷೇತ್ರದ ವ್ಯಾಪ್ತಿಯಿಂದ ಹೊರಗೆ ಕಳುಹಿಸಲು ಕ್ರಮವಹಿಸುವುದು., ಈ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ 188ರ ಪ್ರಕಾರ ಕ್ರಮ ಜರುಗಿಸಲಾಗುವುದು. ಈ ಆದೇಶವು ಮತದಾನ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ, ಪೊಲೀಸ್ ಅಧಿಕಾರಿಗಳಿಗೆ ಹಾಗೂ ಚುನಾವಣಾ ಕಾರ್ಯನಿರತ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಹಾಗೂ ಒಬ್ಬೊಬ್ಬರಾಗಿ ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡುವ ಮತದಾರರಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಪ್ರತಿಬಂಧಕಾಜ್ಞೆಯಲ್ಲಿ ತಿಳಿಸಿದ್ದಾರೆ.

ವಿಜಯನಗರ ಜಿಲ್ಲಾ ಪೊಲೀಸ್ ಅಧೀಕ್ಷಕರು ಈ ಆದೇಶವನ್ನು ಪರಿಣಾಮಕಾರಿಯಾಗಿ ಜಾರಿ ಬರುವಂತೆ ಅಗತ್ಯಕ್ರಮ ಕೈಗೊಳ್ಳಬೇಕೆಂದು ಆದೇಶಿಸಲಾಗಿದೆ.

ಲೋಕಸಭಾ ಚುನಾವಣೆ: ಹೊಸಪೇಟೆಯಲ್ಲಿ ಮತದಾನ ಜಾಗೃತಿಗಾಗಿ ಬೈಕ್ ರ‍್ಯಾಲಿ ವಿಶೇಷ

ಹೊಸಪೇಟೆ ವಿಜಯನಗರ ಏ.- ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನೆಲೆಯಲ್ಲಿ ಮತದಾನ ಜಾಗೃತಿ ಅಭಿಯಾನದ ಅಂಗವಾಗಿ ಭಾರತ ಚುನಾವಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ ಸಮಿತಿಯಿಂದ ಹೊಸಪೇಟೆ ನಗರದಲ್ಲಿ ಏಪ್ರೀಲ್ 30ರಂದು ಬೈಕ್ ರಾಲಿ ನಡೆಯಿತು.

ಬೈಕ್ ರ‍್ಯಾಲಿ ಹಿನ್ನೆಲೆಯಲ್ಲಿ ಬೇರೆ ಬೇರೆ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯು ತಮ್ಮ ತಮ್ಮ ಬೈಕ್‌ಗಳು ಮತ್ತು ಸ್ಕೂಟಿಗಳೊಂದಿಗೆ ಸಂಜೆ ವೇಳೆಗೆ ಜಿಲ್ಲಾಡಳಿತ ಭವನದ ಆವರಣಕ್ಕೆ ಆಗಮಿಸಿದ್ದರು. ಮಹಿಳಾ ನೌಕರರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದು ವಿಶೇಷವಾಗಿತ್ತು.

ಹೊಸಪೇಟೆಯ ಡ್ಯಾಮ್ ರಸ್ತೆಯಲ್ಲಿರುವ ಜಿಲ್ಲಾಡಳಿತ ಭವನದ ಆವರಣದಲ್ಲಿ ಬೈಕ್ ರ‍್ಯಾಲಿಗೆ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಮತದಾನ ಜಾಗೃತಿಯ ಧ್ವಜ ತೋರಿಸುವ ಮೂಲಕ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಮತದಾನವು ಪ್ರತಿಯೊಬ್ಬರಿಗೂ ಸಂವಿಧಾನಬದ್ಧವಾಗಿ ಬಂದಿರುವ ಹಕ್ಕಾಗಿದೆ. ಹೀಗಾಗಿ ಪ್ರತಿಯೊಬ್ಬರು ಮತದಾನದಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು. ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಸದಾಶಿವ ಪ್ರಭು ಬಿ ಅವರು ಮಾತನಾಡಿದರು.

ಜಿಲ್ಲಾಡಳಿತದ ಸಹಯೋಗದಲ್ಲಿ ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ ಸಮಿತಿಯಿಂದ ಜಿಲ್ಲಾದ್ಯಂತ ಸಾಕಷ್ಟು ಸ್ವೀಪ್ ಕಾರ್ಯಕ್ರಮಗಳನ್ನು ರೂಪಿಸಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಮತದಾನದ ಜಾಗೃತಿ ಮೂಡಿಸಲಾಗಿದೆ ಎಂದು ತಿಳಿಸಿದರು.

ವಿವಿಧೆಡೆ ಸಂಚಾರ: ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಸ್ವತಃ ತಾವೆ ಬೈಕ್ ಚಲಾಯಿಸಿ ಇತರರಿಗೆ ಸ್ಫೂರ್ತಿ ತುಂಬಿದರು.

ಬೈಕ್ ರಾಲಿಯು ಜಿಲ್ಲಾಡಳಿತ ಭವನದಿಂದ ಆರಂಭಗೊಂಡು ಸಾಯಿಬಾಬಾ ಸರ್ಕಲ್, ಬಳ್ಳೋಟಾ ಕಾಲೊನಿ, ನೆಹರೂ ಕಾಲೊನಿ, ವಾಲ್ಮೀಕಿ ಸರ್ಕಲ್, ಮಿಲನ್ ಪೆಟ್ರೋಲ್ ಬಂಕ್, ಚಪ್ಪರದಹಳ್ಳಿ, ಹಿರೋಹೊಂಡಾ ಶೋರೂಮ್, ಬಸವೇಶ್ವರ ಬಡಾವಣೆ, ಸ್ವಾಗಿ ಮಾರ್ಕೆಟ್ ಮೂಲಕ ಸಂಚರಿಸಿ ಸಿಟಿ ಮುನ್ಸಿಪಲ್ ಆಫೀಸ್ ಆವರಣಕ್ಕೆ ಬಂದು ಮುಕ್ತಾಯವಾಯಿತು.

ಬೈಕ್ ರ‍್ಯಾಲಿ ವೇಳೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುನಾಥ ಹೆಚ್.ಎಸ್., ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶರಾದ ರಾಮಚಂದ್ರಪ್ಪ, ರೇಷ್ಮೆ ಇಲಾಖೆಯ ಉಪ ನಿರ್ದೇಶಕರಾದ ಸುಧೀರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಯುವರಾಜ ನಾಯಕ, ಆಹಾರ ಇಲಾಖೆಯ ಉಪ ನಿರ್ದೇಶಕರಾದ ಮಲ್ಲಿಕಾರ್ಜುನ, ಹೊಸಪೇಟೆ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಹರೀಶ್, ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ, ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕರಾದ ರವಿಕುಮಾರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿಂದು ಯಲಿಗಾರ ಸೇರಿದಂತೆ ಇತರರು ಇದ್ದರು.

ಪ್ರತಿಜ್ಞಾವಿಧಿ ಬೋಧನೆ: ಬೈಕ್ ರ‍್ಯಾಲಿಯ ಆರಂಭಕ್ಕು ಮೊದಲು ಮತದಾನ ಜಾಗೃತಿಯ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಅನ್ನದಾನೇಶ್ವರ ಸ್ವಾಮಿ ಜೆ.ಎಂ.ಅವರು ಪ್ರತಿಜ್ಞಾವಿಧಿ ಬೋಧಿಸಿದರು.

ಗಮನ ಸೆಳೆದ ಫಲಕಗಳು: 'ಮತದಾನಕ್ಕಿಂತ ಇನ್ನೊಂದಿಲ್ಲ ನಾನು ಖಚಿತವಾಗಿ ಮತದಾನ ಮಾಡುವೆ.', 'ನಿಮ್ಮ ಮತ ನಿಮ್ಮ ಹಕ್ಕು'., 'ಕಡ್ಡಾಯವಾಗಿ ಮಾತದಾನ ಮಾಡಿ' ಎನ್ನುವ ನಾನಾ ಘೋಷಣೆಗಳು ಇರುವ ಫಲಕಗಳನ್ನು ಬೈಕ್‌ಗೆ ಕಟ್ಟಿ ಸಾಲಾಗಿ ಸಾಗಿದ್ದು ವಿಶೇಷವಾಗಿತ್ತು.

ಮೇ 02 ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಮತದಾನ ಜಾಗೃತಿ ಕುರಿತು 'ಪ್ರತಿಜ್ಞಾವಿಧಿ ಭೋದನೆ' ಕಾರ್ಯಕ್ರಮ

ಬಳ್ಳಾರಿ,ಏ.-:ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮತದಾನ ಜಾಗೃತಿ ಕುರಿತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಏ.02 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಳೂರು ರಸ್ತೆಯಲ್ಲಿರುವ ಹೊಸ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಆವರಣದಲ್ಲಿ 'ಪ್ರತಿಜ್ಞಾವಿಧಿ ಭೋದನೆ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಎಸ್.ಹೆಚ್.ಪುಷ್ಪಾಂಜಲಿ ದೇವಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಈ ವೇಳೆ ಜಿಲ್ಲಾ ನ್ಯಾಯಾಲಯದ ವಿವಿಧ ನ್ಯಾಯಾಧೀಶರು ಭಾಗವಹಿಸುವರು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ತುಮ್ಮರಗುದ್ದಿ ಗ್ರಾಮದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ

ಕೊಪ್ಪಳ, ಏಪ್ರಿಲ್ -: ಸಂವಿಧಾನ ನಮಗೆ ಮತದಾನ ಮಾಡುವ ಹಕ್ಕನ್ನು ಕೊಟ್ಟಿದ್ದು, ಅದನ್ನು ಎಲ್ಲರೂ ಕಡ್ಡಾಯವಾಗಿ ಚಲಾಯಿಸಬೇಕು ಎಂದು ತಾ.ಪಂ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೊಲೀಸ್ ಪಾಟೀಲ್ ಹೇಳಿದರು.

ಯಲಬುರ್ಗಾ ತಾಲೂಕಿನ ತುಮ್ಮರಗುದ್ದಿ ಗ್ರಾಮದ ನರೇಗಾ ಯೋಜನೆಯಡಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಸ್ವೀಪ್ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 2024 ರ ಲೋಕಸಭಾ ಚುನಾವಣೆಯ ಮೂರನೇ ಹಂತದ ಮತದಾನವು ಮೇ 7 ರಂದು ನಡೆಯಲಿದ್ದು, ನರೇಗಾ ಕೂಲಿಕಾರರು ಕಡ್ಡಾಯವಾಗಿ ಮತದಾನ ಮಾಡಬೇಕು. ಮತದಾನದಿಂದ ಯಾರೂ ವಂಚಿತರಾಗಬಾರದು ಎಂದು ಸಲಹೆ ನೀಡಿದರು.

ನರೇಗಾ ಯೋಜನೆಯಡಿ ಈಗ ವಲಸೆ ಯಾಕ್ರಿ ನಮ್ಮೂರಲ್ಲೇ ಉದ್ಯೋಗ ಖಾತ್ರಿ ಅಭಿಯಾನದಡಿ ಮೂರು ತಿಂಗಳ ಅಭಿಯಾನ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಇದರ ಸದುಪಯೋಗ ಪಡೆದು ತಮಗಿರುವ 100 ಮಾನವ ದಿನಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಈ ವೇಳೆ ಕೂಲಿಕಾರರಿಗೆ ಮತದಾನದ ಪ್ರತಿಜ್ಞಾವಿಧಿ ಬೋಧಿಸಲಾಯಿತು. ತಾಪಂ ತಾಂತ್ರಿಕ ಸಂಯೋಜಕರಾದ ಸಂತೋಷ ನಂದಾಪುರ, ಐಇಸಿ ಸಂಯೋಜಕ ಶರಣಪ್ಪ ಹಾಳಕೇರಿ, ತಾಂತ್ರಿಕ ಸಹಾಯಕರಾದ ಸಂಗಮೇಶ ಜಡಿಮಠ, ಗ್ರಾ.ಪಂ ಕಾರ್ಯದರ್ಶಿಗಳಾದ ಶ್ರೀಕಾಂತ, ಡಿಇಒ ರಮೇಶ, ಜಿಕೆಎಂ ಶಿಲ್ಪಾ, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.

ಕಿನ್ನಾಳ ಗ್ರಾಮದಲ್